# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>Part – I | ಬೆಂಗಳೂರು, ಗುರುವಾರ, ೦೯, ಜುಲೈ, ೨೦೨೬ (ಆಷಾಢ, ೧೮, ಶಕವರ್ಷ, ೧೯೪೮)<br>BENGALURU, THURSDAY, 09, JULY, 2026 (ASHADHA, 18, SHAKAVARSHA, 1948) | ನಂ. ೫೧೫<br>No. 515 |
|---|---|---|


## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 3 ಸೇನೌವ 2026

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಡಾ|| ಬಿ.ಆರ್ ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ: 09.07.2026

## <u>ಸುತ್ತೋಲೆ</u>

**ವಿಷಯ:** ರಾಜ್ಯ ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು W.P. No.35777/2025ರಲ್ಲಿ ನೀಡಿರುವ ತೀರ್ಪನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ:** (1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 14 ಸೇನೌವ 2025 ದಿನಾಂಕ: 12.05.2025
(2) ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ: 30.03.2026.

****

ಆರ್ಥಿಕ ಇಲಾಖೆಯ ವ್ಯಾಪ್ತಿಗೊಳಪಡುವ ಅಬಕಾರಿ ಇಲಾಖೆಯ ಸೇವೆಗೆ ಸೇರಿದ ಅಬಕಾರಿ ಉಪ ಅಯುಕ್ತರಾದ ಶ್ರೀ ಕೆ. ಅರುಣ್ ಕುಮಾರ್ ಇವರಿಗೆ ಸ್ಥಳನಿಯುಕ್ತಿಗೊಳಿಸದೆ ವರ್ಗಾವಣೆ ಮಾಡಿರುವುದನ್ನು ಪ್ರಶ್ನಿಸಿ, ಸದರಿಯವರು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ: 35777/2025 ರ ದಿನಾಂಕ:30.01.2026 ರಂದು ಮಾನ್ಯ ನ್ಯಾಯಾಲಯವು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ, ಯಾವುದೇ ನೌಕರರು ಸ್ಥಳ ನಿಯುಕ್ತಿಗಾಗಿ ಕಾಯದಂತೆ ಕಡ್ಡಾಯವಾಗಿ ಸ್ಥಳ ನಿಯುಕ್ತಿ ನೀಡತಕ್ಕದ್ದೆಂದು ಹಾಗೂ ಈ ಸೂಚನೆಗಳನ್ನು ಉಲ್ಲಂಘಿಸಿ ವರ್ಗಾವಣೆಗಳಲ್ಲಿ ಸರ್ಕಾರಿ ನೌಕರರಿಗೆ ಸ್ಥಳನಿಯುಕ್ತಿ ನೀಡದೇ ಕಡ್ಡಾಯ ನಿರೀಕ್ಷಣೆಯಲ್ಲಿರಿಸಿದಲ್ಲಿ, ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ಆ ಅವಧಿಗೆ ಪಾವತಿಸಲಾದ ವೇತನ ಮತ್ತು ಭತ್ಯೆಯನ್ನು ಸಂಬಂಧಿತ ಸಕ್ಷಮ ಪ್ರಾಧಿಕಾರಗಳಿಂದ ವಸೂಲಿ ಮಾಡಲಾಗುವುದೆಂದು ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ /

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ ಹಾಗೂ ಇತರೆ ಸಂಬಂಧಿತ ಸಕ್ಷಮ ಪ್ರಾಧಿಕಾರಿಗಳು / ಇಲಾಖಾ ಮುಖ್ಯಸ್ಥರುಗಳಿಗೆ ಉಲ್ಲೇಖಿತ (2)ರ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ.

ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆ ಸಂಬಂಧ ರಾಜ್ಯ ಸರ್ಕಾರವು ಪ್ರತಿವರ್ಷವು ಹೊರಡಿಸುವ ಮಾರ್ಗಸೂಚಿಗಳಲ್ಲಿ, ವೃಂದ-'ಎ' ಮತ್ತು 'ಬಿ' ಗುಂಪಿಗೆ ಸೇರಿದ ಅಧಿಕಾರಿಗಳ ವರ್ಗಾವಣೆಗಳಿಗಾಗಿ ಸಂಬಂಧಪಟ್ಟ ಇಲಾಖಾ ಸಚಿವರುಗಳಿಗೆ ಹಾಗೂ ವೃಂದ-'ಸಿ' ಮತ್ತು 'ಡಿ' ಗುಂಪಿನ ಸಿಬ್ಬಂದಿಗಳ ವರ್ಗಾವಣೆಗಳಿಗಾಗಿ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳಿಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಕೆಲವೊಂದು ಸಂದರ್ಭಗಳಲ್ಲಿ, ವರ್ಗಾವಣೆಗೊಂಡ ಅಧಿಕಾರಿಗಳಿಗೆ ಆಡಳಿತಾತ್ಮಕ ದೃಷ್ಟಿಯಿಂದ ತಕ್ಷಣ ಸ್ಥಳನಿಯುಕ್ತಿಗೊಳಿಸಲು ಸಾಧ್ಯವಾಗದೇ ಕಡ್ಡಾಯ ನಿರೀಕ್ಷಣೆಯಲ್ಲಿರಿಸುವ ಅನಿವಾರ್ಯ ಸನ್ನಿವೇಶ ಉದ್ಭವವಾಗುವುದನ್ನು ಹಾಗೂ ಆಡಳಿತಾತ್ಮಕ ಅನುಷ್ಠಾನದಲ್ಲಿ ಉಂಟಾಗುವ ತೊಂದರೆಗಳನ್ನು ಅರಿತು ದಿನಾಂಕ: 30.03.2026ರ ಸುತ್ತೋಲೆಯನ್ನು ಹಿಂಪಡೆದು, ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸಲು ಸೂಚಿಸಲಾಗಿದೆ:

1. ಸಾಮಾನ್ಯವಾಗಿ, ಯಾವುದೇ ಅಧಿಕಾರಿ/ನೌಕರರನ್ನು ವರ್ಗಾವಣೆ ಮಾಡುವಾಗ, ಅವರಿಗೆ ಮುಂದಿನ ಹುದ್ದೆ (Next Posting) ಸೂಚಿಸದೆ ವರ್ಗಾವಣೆ ಮಾಡತಕ್ಕದ್ದಲ್ಲ.
2. ಕಾನೂನು ಸಂಬಂಧಿತ ಸಮಸ್ಯೆಗಳು, ಅಮಾನತು (Suspension), ಹಣದ ದುರ್ಬಳಕೆ (Misappropriation of funds), ಅಧಿಕಾರ ದುರ್ಬಳಕೆ (Misuse of powers) ಹಾಗೂ ತೀವ್ರ ಸ್ವರೂಪದ ಇಲಾಖಾ ವಿಚಾರಣೆ/ಗಂಭೀರ ಆರೋಪಗಳು ಬಾಕಿಯಿರುವ ಪ್ರಕರಣಗಳನ್ನು ಹೊರತುಪಡಿಸಿ, ಇತರ ಅನಿವಾರ್ಯ ಆಡಳಿತಾತ್ಮಕ ಕಾರಣಗಳಿಂದ ವರ್ಗಾವಣೆಗೊಂಡ ಅಧಿಕಾರಿ/ನೌಕರರಿಗೆ ತಕ್ಷಣ ಸ್ಥಳನಿಯುಕ್ತಿ ನೀಡಲು ಸಾಧ್ಯವಾಗದಿದ್ದಲ್ಲಿ, ವರ್ಗಾವಣೆಗೊಂಡ ಅಧಿಕಾರಿ/ನೌಕರರನ್ನು ಸಕ್ಷಮ ಪ್ರಾಧಿಕಾರಿಗಳ ಮಟ್ಟದಲ್ಲಿ ಗರಿಷ್ಠ ಒಂದು ತಿಂಗಳಿಗಿಂತ ಹೆಚ್ಚು ಕಾಲ ಕಡ್ಡಾಯ ನಿರೀಕ್ಷಣೆಯಲ್ಲಿರಿಸತಕ್ಕದ್ದಲ್ಲ.
3. ವರ್ಗಾವಣೆಗೊಂಡ ಅಧಿಕಾರಿ/ನೌಕರರನ್ನು ಒಂದು ತಿಂಗಳಿಗಿಂತ ಹೆಚ್ಚು ಕಾಲ ಕಡ್ಡಾಯ ನಿರೀಕ್ಷಣೆಯಲ್ಲಿ ಮುಂದುವರಿಸುವ ಆಡಳಿತಾತ್ಮಕ ಅನಿವಾರ್ಯತೆ ಇದ್ದಲ್ಲಿ, ಸಕ್ಷಮ ಪ್ರಾಧಿಕಾರಿಗಳು ಸೂಕ್ತ ಕಾರಣಗಳನ್ನು ಲಿಖಿತವಾಗಿ ದಾಖಲಿಸಿ, ಮಾನ್ಯ ಮುಖ್ಯಮಂತ್ರಿಯವರ ಪೂರ್ವಾನುಮೋದನೆ ಪಡೆದು, ಗರಿಷ್ಠ ಮೂರು ತಿಂಗಳವರೆಗೆ ಮಾತ್ರ ಕಡ್ಡಾಯ ನಿರೀಕ್ಷಣೆಯಲ್ಲಿರಿಸಬಹುದು.

(ಪ್ರತಿಭಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-3)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

MADESHWARA
NARASIMHA MURTHY
JAYASIMHA